# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 30 (14) |
| **ಸದಸ್ಯರ ಹೆಸರು** | : ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : 13-12-2021 |
| **ಉತ್ತರಿಸುವ ಸಚಿವರು** | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರ ಸಂಖ್ಯೆ ಎಷ್ಟು; | • ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವೃಂದಗಳ ಖಾಯಂ ಶಿಕ್ಷಕರ ಸಂಖ್ಯೆ 1,46,671<br>• ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರ ಸಂಖ್ಯೆ: 35,115 ಹಾಗೂ ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರ ವೃಂದದ ಗ್ರೇಡ್-2 ವೃಂದದ ಹುದ್ದೆಗೆ ನೇಮಕಗೊಂಡು ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಟಿ.ಜಿ.ಟಿ ಶಿಕ್ಷಕರ ಸಂಖ್ಯೆ 3,408<br>ಒಟ್ಟು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ: 38,523. |
| ಆ. | ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | • ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಎಲ್ಲಾ ವೃಂದದ ಒಟ್ಟು ಹುದ್ದೆಗಳ ಸಂಖ್ಯೆ - 41,869<br>• ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ - 8292 |
| ಇ. | ಖಾಯಂ ಶಿಕ್ಷಕರನನು ನೇಮಕ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; | ಹೌದು. |
| ಈ. | ಅತಿಥಿ ಶಿಕ್ಷಕರಾಗಿ ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಅನುಸರಿಸುತ್ತಿರುವ ಮಾನದಂಡವೇನು; | ಸರ್ಕಾರದ ಆದೇಶ ಸಂಖ್ಯೆ ಇಪಿ 380 ಎಸ್ಇಎಸ್ 2021 ದಿನಾಂಕ :06-11-2021.<br>ಸರ್ಕಾರದ ಆದೇಶ ಸಂಖ್ಯೆ ಇಪಿ 370 ಎಸ್ಇಎಸ್ 2021 ದಿನಾಂಕ :06-11-2021.<br>(ಪ್ರತಿ ಲಗತ್ತಿಸಿದೆ.) |
| ಉ. | ಅತಿಥಿ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; | • ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಆರ್ಥಿಕ ಇಲಾಖೆಯು ಅನುಮತಿ ನೀಡಿರುವ ಒಟ್ಟು 18,000 ಹುದ್ದೆಗಳನ್ನು ಜಿಲ್ಲೆಗಳಿಗೆ ಮರು ಹಂಚಿಕೆ ಮಾಡಲಾಗಿದೆ.<br>• ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ |

<table>
<tr><td></td><td></td><td>ವಿಷಯ ಶಿಕ್ಷಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಒಟ್ಟು 5078 ಅತಿಥಿ ಶಿಕ್ಷಕರನ್ನು ಹಂಚಿಕೆ ಮಾಡಲಾಗಿದೆ.</td></tr>
<tr><td>ಊ.</td><td>ಎಷ್ಟು ವರ್ಷದ ಅವಧಿಯವರೆಗೂ ಅತಿಥಿ ಶಿಕ್ಷಕರಾಗಿ ಕಾರ್ಯನಿರ್ವಹಿಸಬಹುದು;</td><td>ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಶಿಕ್ಷಕರ ನೇಮಕಾತಿಯಾದಾಗಿನಿಂದ ಆ ಶೈಕ್ಷಣಿಕ ಸಾಲಿನ ಅಂತ್ಯದವರೆಗೆ ಅಥವಾ ಸದರಿ ಖಾಲಿ ಹುದ್ದೆಗೆ ಖಾಯಂ ಶಿಕ್ಷಕರ ಭರ್ತಿಯಾಗುವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಸರ್ಕಾರಿ ಪ್ರಾಥಮಿಕ /ಪ್ರೌಢಶಾಲೆಗಳಲ್ಲಿನ ಖಾಲಿ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ.</td></tr>
<tr><td>ಎ.</td><td>ರಾಜ್ಯದಲ್ಲಿ ವಿಶೇಷ ಶಿಕ್ಷಕರ (ಸಂಗೀತಾ/ ಚಿತ್ರಕಲೆ/ದೈಹಿಕ ಶಿಕ್ಷಕರು) ಸಂಖ್ಯೆ ಎಷ್ಟು?</td><td>
<table>
<tr><th>ಕ್ರಮ ಸಂಖ್ಯೆ</th><th>ಶಾಲೆಯ ವಿವರ</th><th>ಸಂಗೀತ</th><th>ಚಿತ್ರಕಲೆ</th><th>ದೈಹಿಕ ಶಿಕ್ಷಕರು</th></tr>
<tr><td>1</td><td>ಸರ್ಕಾರಿ ಪ್ರಾಥಮಿಕ</td><td>259</td><td>224</td><td>6772</td></tr>
<tr><td>2</td><td>ಸರ್ಕಾರಿ ಪ್ರೌಢಶಾಲೆ</td><td>763</td><td>1439</td><td>4941</td></tr>
<tr><td></td><td>ಒಟ್ಟು.</td><td>1022</td><td>1663</td><td>11713</td></tr>
</table>
</td></tr>
</table>

**ಸಂಖ್ಯೆ**: ಇಪಿ 45 ಪಿಎಂಎ 2021

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು.